# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯಃ ರಾಜ್ಯದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ರಾಷ್ಟ್ರೀಯ ಹೆದ್ದಾರಿಗಳು ಮತ್ತು ಲೋಕೋಪಯೋಗಿ ಇಲಾಖೆಗಳ ರಸ್ತೆ ಯೋಜನೆಗಳಿಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕರಣಗಳನ್ನು ಇತ್ಯರ್ಥಗೊಳಿಸಲು ಜಿಲ್ಲಾ ಮಟ್ಟದ ಜಿಲ್ಲಾ ಸಮನ್ವಯ ಸಮಿತಿ ರಚಿಸುವ ಬಗ್ಗೆ.

**ಪ್ರಸ್ತಾವನೆ:**

ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ದೇಶಾದ್ಯಂತ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಯೋಜನೆಯಡಿ ರಸ್ತೆಗಳನ್ನು ಅಭಿವೃದ್ಧಿಪಡಿಸುತ್ತಿದೆ. ಈ ಸಂಬಂಧ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ರಾಜ್ಯದಲ್ಲಿ ರಸ್ತೆ ಯೋಜನೆಗಳಿಗೆ ಸಂಬಂಧಪಟ್ಟ ಭೂಸ್ವಾದೀನ ಪ್ರಕರಣಗಳಲ್ಲಿ ಆಗುತ್ತಿರುವ ವಿಳಂಬವನ್ನು ತಪ್ಪಿಸಲು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲಾ ಸಮನ್ವಯ ಸಮಿತಿಗಳನ್ನು ರಚಿಸಲು ಸಲಹೆ ಮಾಡಿದೆ. ಅದರಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ರಾಷ್ಟ್ರೀಯ ಹೆದ್ದಾರಿಗಳು ಮತ್ತು ಲೋಕೋಪಯೋಗಿ ಇಲಾಖೆಗಳ ರಸ್ತೆ ಯೋಜನೆಗಳಿಗೆ ಸಂಬಂಧಪಟ್ಟ ಭೂಸ್ವಾಧೀನ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲಾ ಮಟ್ಟದ ಸಮಿತಿಯನ್ನು ರಚಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಲೋಇ 57 ಸಿಎನ್‌ಹೆಚ್ 2007 ಬೆಂಗಳೂರು, ದಿನಾಂಕಃ 22.9.2007** 25

ಸರ್ಕಾರವು ರಾಜ್ಯದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ರಾಷ್ಟ್ರೀಯ ಹೆದ್ದಾರಿಗಳು ಮತ್ತು ಲೋಕೋಪಯೋಗಿ ಇಲಾಖೆಗಳ ರಸ್ತೆ ಯೋಜನೆಗಳಿಗೆ ಸಂಬಂಧಪಟ್ಟ ಭೂಸ್ವಾಧೀನ ಪ್ರಕರಣ ಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಪ್ರತಿ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಈ ಕೆಳಗಿನ ಅಧಿಕಾರಿ ಸದಸ್ಯರನ್ನೊಳಗೊಂಡ ಜಿಲ್ಲಾ ಮಟ್ಟದ ಜಿಲ್ಲಾ ಸಮನ್ವಯ ಸಮಿತಿಯನ್ನು ನೇಮಕ ಮಾಡಿ ಆದೇಶಿಸಿದೆ.

| | |
|---|---|
| 1) ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿ | ಅಧ್ಯಕ್ಷರು |
| 2) ಸಂಬಂಧಪಟ್ಟ ಜಿಲ್ಲಾ ಯೋಜನಾ ನಿರ್ದೇಶಕರು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ | ಸದಸ್ಯರು |
| 3) ಸಂಬಂಧಪಟ್ಟ ಕಾರ್ಯಪಾಲಕ ಇಂಜನಿಯರ್, ಲೋಕೋಪಯೋಗಿ ಇಲಾಖೆ | ಸದಸ್ಯ ಕಾರ್ಯದರ್ಶಿ |
| 4) ಸಂಬಂಧಪಟ್ಟ ಕಾರ್ಯಪಾಲಕ ಇಂಜನಿಯರ್ ರಾಷ್ಟ್ರೀಯ ಹೆದ್ದಾರಿಗಳು: ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ | ಸದಸ್ಯರು |
| 5) ಜಿಲ್ಲಾ ದೂರವಾಣಿ ಅಧಿಕಾರಿ | ಸದಸ್ಯರು |
| 6) ಸಂಬಂಧಪಟ್ಟ ಜನರಲ್ ಮೆನೇಜರ್, ವಿದ್ಯುಚ್ಛಕ್ತಿ ಸರಬರಾಜು ನಿಗಮ | ಸದಸ್ಯರು |
| 7) ಕಾರ್ಯಪಾಲಕ ಇಂಜನಿಯರ್, ಜಲಸಂಪನ್ಮೂಲ ಇಲಾಖೆ | ಸದಸ್ಯರು |
| 8) ಸಂಬಂಧಿಸಿದ ನಗರಸಭಾ ಆಯುಕ್ತರು | ಸದಸ್ಯರು |

9) ಜಿಲ್ಲಾ ಅರಣ್ಯ ಅಧಿಕಾರಿ ಸದಸ್ಯರು

ಸಮಿತಿಯು ಜಿಲ್ಲಾ ಮಟ್ಟದಲ್ಲಿ ಆಗತ್ಯವಿರುವ ಇತರೆ ಸದಸ್ಯ ಅಧಿಕಾರಿಗಳನ್ನು ನೇಮಕ ಮಾಡಿಕೊಳ್ಳಬಹುದು.

ಸಮಿತಿಯು ಪ್ರತಿ ತಿಂಗಳು ಸಭೆ ನಡೆಸಿ, ಭೂಸ್ವಾಧೀನ ಪ್ರಕರಣಗಳು: ಪೂರ್ವ ನಿರ್ಮಾಣ ಕಾರ್ಯಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಅಗತ್ಯ ಕ್ರಮ ತೆಗೆದುಕೊಂಡು ಸರ್ಕಾರಕ್ಕೆ ವರದಿ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ಜಿ.ನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಲೋಕೋಪಯೋಗಿ ಇಲಾಖೆ(ಸಂಪರ್ಕ).

---

ಪ್ರತಿಗಳು:

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ,ಬೆಂಗಳೂರು.
4) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ದಂಡಾಧಿಕಾರಿಗಳು ಇವರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ. ಇವರು ಆದೇಶದಲ್ಲಿ ಸೂಚಿಸಿರುವ ಅಧಿಕಾರಿಗಳನ್ನು ಒಳಗೊಂಡಿರುವ ಜಿಲ್ಲಾ ಸಮನ್ವಯ ಸಮಿತಿಯನ್ನು ನೇಮಕ ಮಾಡಿಕೊಂಡು ಭೂಸ್ವಾಧೀನ ಪ್ರಕರಣಗಳು: ಪೂರ್ವ ನಿರ್ಮಾಣ ಕಾರ್ಯಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಕ್ರಮ ತೆಗೆದುಕೊಳ್ಳಲು ತಿಳಿಸಿದೆ. ಈ ಸಂಬಂಧ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಪತ್ರ ದಿನಾಂಕ 20.12.2006 ರ ಪ್ರತಿಯನ್ನು ಸಹ ಮಾಹಿತಿಗಾಗಿ ಲಗತ್ತಿಸಿದೆ.
5) ಎಲ್ಲಾ ಅಧೀಕ್ಷಕ ಇಂಜಿನಿಯರ್: ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಮತ್ತು ರಾಷ್ಟ್ರೀಯ ಹೆದ್ದಾರಿಗಳು.
6) ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
7) ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
8) ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು, ಲೋಇ(ಸಂಪರ್ಕ ಮತ್ತು ಕಟ್ಟಡ).
9) ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.